Akashvani : Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

21.01.2026 18.40 hrs
**************

ಮುಖ್ಯಾಂಶಗಳು

- ನಾಳೆಯಿಂದ ವಿಧಾನಮಂಡಲ ಜಂಟಿ ಅಧಿವೇಶನ - ಭಾಷಣ ಮಾಡಲು ನಿರಾಕರಿಸಿದ ರಾಜ್ಯಪಾಲರು - ಸರ್ಕಾರದಿಂದ ಮನವೊಲಿಕೆ ಯತ್ನ
- ಬೆಂಗಳೂರಿನಲ್ಲಿ ಹೂಡಿಕೆ ಮಾಡುವಂತೆ ದಾವೋಸ್ ವಿಶ್ವ ಆರ್ಥಿಕ ಸಮ್ಮೇಳನದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ
- ಬೆಂಗಳೂರಿನಲ್ಲಿ ಸಿಎಂಆರ್ ತಂತ್ರಜ್ಞಾನ ಸಂಸ್ಥೆಯ ಬೆಳ್ಳಿ ಮಹೋತ್ಸವ ಉದ್ಘಾಟಿಸಿದ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್
- ಪ್ರಸಾದ್ ಯೋಜನೆಯಡಿ ಚಾಮುಂಡಿ ಬೆಟ್ಟದ ಪಾರಂಪರಿಕತೆಗೆ ಧಕ್ಕೆಯಾಗದಂತೆ ಅಭಿವೃದ್ಧಿ - ಸಚಿವ ಡಾ.ಎಚ್.ಸಿ.ಮಹದೇವಪ್ಪ
- ಸ್ಥಳೀಯ ಸಂಸ್ಥೆ ಚುನಾವಣೆ ; ಮೈತ್ರಿ ಕುರಿತಂತೆ ಬಿಜೆಪಿ ನಾಯಕರೊಂದಿಗೆ ಚರ್ಚಿಸಿ ತೀರ್ಮಾನ - ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ
- ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಪಂದ್ಯ ನಡೆಸಲು ಸಿದ್ಧ - ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಘೋಷಣೆ

***************

ನಾಳೆಯಿಂದ ವಿಧಾನಮಂಡಲ ಜಂಟಿ ಅಧಿವೇಶನ ಆರಂಭವಾಗಲಿದೆ. ಅಧಿವೇಶನದಲ್ಲಿ ಪ್ರಮುಖವಾಗಿ ಮನ್ರೇಗಾ ಯೋಜನೆ ಕುರಿತಂತೆ ವಿಶೇಷ ಚರ್ಚೆ ನಡೆಯಲಿದೆ.

ಜಂಟಿ ಅಧಿವೇಶನದ ಮೊದಲ ದಿನವಾದ ನಾಳೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಬಳಿಕ, ನರೇಗಾ ಯೋಜನೆಯಲ್ಲಿ ಆಗಿರುವ ಬದಲಾವಣೆಗಳು, ಅದರ ಅನುಷ್ಠಾನ ಹಾಗೂ ಸವಾಲುಗಳ ಬಗ್ಗೆ ಸದನದಲ್ಲಿ ಸಮಗ್ರ ಚರ್ಚೆ ನಡೆಸಲು ಸರ್ಕಾರ ನಿರ್ಧರಿಸಿದೆ.

ಈ ನಡುವೆ ವಿಕಸಿತ ಭಾರತ ಜಿ-ರಾಮ್-ಜಿ ವಿವಾದದ ಕುರಿತು ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ನಿರಾಕರಿಸಿದ್ದಾರೆ. ಸರ್ಕಾರದ ಮುಖ್ಯಕಾರ್ಯದರ್ಶಿ ಅವರಿಗೆ ತಮ್ಮ ನಿರ್ಧಾರ ತಿಳಿಸಿದ್ದಾರೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.

ಈ ಕುರಿತಂತೆ ಪ್ರತಿಕ್ರಿಯಿಸಿರುವ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ. ಪಾಟೀಲ್, ರಾಜ್ಯ ಸರ್ಕಾರ ಸಿದ್ಧ ಪಡಿಸಿದ ಭಾಷಣದ ಕೆಲವು ಅಂಶಗಳಿಗೆ ರಾಜ್ಯಪಾಲರು ಆಕ್ಷೇಪ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದ್ದಾರೆ.

ಇನ್ನೊಂದು ಬೆಳವಣಿಗೆಯಲ್ಲಿ ಕಾನೂನು ಸಚಿವ ಎಚ್.ಕೆ. ಪಾಟೀಲ್, ಅಡ್ವೊಕೇಟ್ ಜನರಲ್ ಶಶಿಕಿರಣ್ ಶೆಟ್ಟಿ, ಮುಖ್ಯಮಂತ್ರಿಯವರ ಕಾನೂನು ಸಲಹೆಗಾರ ಎ.ಎಸ್. ಪೊನ್ನಣ್ಣ ರಾಜಭವನಕ್ಕೆ ಆಗಮಿಸಿ ರಾಜ್ಯಪಾಲರನ್ನು ಮನವೊಲಿಸುವ ಯತ್ನ ನಡೆಸಿದ್ದಾರೆ.

***************

ರಾಜ್ಯ ಸರ್ಕಾರ ವಿಶೇಷ ಅಧಿವೇಶನ ಕರೆದು ಕೇಂದ್ರ ಸರ್ಕಾರದ ಯೋಜನೆಗೆ ಅಡ್ಡಗಾಲು ಹಾಕಲು ಪ್ರಯತ್ನ ನಡೆಸುತ್ತಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಅಧಿವೇಶನ ನಡೆಸುವ ಅಗತ್ಯವಿರಲಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ವಿಕಸಿತ ಭಾರತ್ ಜಿ-ರಾಮ್-ಜಿ ಯೋಜನೆಯ ವಿರುದ್ಧ ನಿರ್ಣಯ ಕೈಗೊಂಡು ಅದನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗುತ್ತದೆ. ಆದರೆ ಈ ಯೋಜನೆಯಲ್ಲಿ ನಿಜವಾದ ಫಲಾನುಭವಿಗಳಿಗೆ ಕೂಲಿ ಸಿಗುವಂತೆ ಪ್ರಧಾನಿ ಮಾಡಿದ್ದಾರೆ ಎಂದು ಸಮರ್ಥಿಸಿಕೊಂಡಿದ್ದಾರೆ.

***************

ಭವಿಷ್ಯದ ನಗರ ಬೆಂಗಳೂರಿಗೆ ಬಂದು ಹೂಡಿಕೆ ಮಾಡುವಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಯಮಿಗಳಿಗೆ ಆಹ್ವಾನ ನೀಡಿದ್ದಾರೆ.

ದಾವೋಸ್ ವಿಶ್ವ ಆರ್ಥಿಕ ಸಮ್ಮೇಳನದಲ್ಲಿ ಇಂದು ಮಾತನಾಡಿದ ಅವರು, ಬೆಂಗಳೂರಿನಲ್ಲಿ ಅತ್ಯುತ್ತಮ ಹವಾಗುಣ, ಸಂಸ್ಕೃತಿ, ಮಾನವ ಸಂಪನ್ಮೂಲ ಲಭ್ಯವಿದ್ದು, ವಿಶ್ವದ ಪ್ರತಿಷ್ಠಿತ ೫೦೦ ಕಂಪನಿಗಳು ಇವೆ ಎಂದು ತಿಳಿಸಿದ್ದಾರೆ.

ವೈಮಾನಿಕ ಕ್ಷೇತ್ರ, ಮಾಹಿತಿ ತಂತ್ರಜ್ಞಾನ, ಮೆಡಿಕಲ್ ಸೇರಿದಂತೆ ಇತರೆ ಕ್ಷೇತ್ರಗಳಲ್ಲಿ ಇಲ್ಲಿನ ಮಾನವ ಸಂಪನ್ಮೂಲ ಕೌಶಲ್ಯ ಹೊಂದಿದೆ. ಬೆಂಗಳೂರಿನಲ್ಲಿ ೨೫ ಲಕ್ಷ ವೃತ್ತಿಪರ ಇಂಜಿನಿಯರ್‌ಗಳಿದ್ದು, ವಿಶ್ವನಾಯಕರು ಹಾಗೂ ಉದ್ಯಮಿಗಳು ಬೆಂಗಳೂರಿನತ್ತ ಆಕರ್ಷಿತರಾಗಿದ್ದಾರೆ ಎಂದು ತಿಳಿಸಿದ್ದಾರೆ.

೨೦೪೫ರ ಗುರಿಯಿಟ್ಟುಕೊಂಡು ರಾಜ್ಯದಲ್ಲಿ ಸಾರಿಗೆ ಸಂಪರ್ಕ ಅಭಿವೃದ್ಧಿಪಡಿಸಲಾಗುತ್ತಿದ್ದು, ಸರ್ಕಾರದಿಂದ ಎಲ್ಲಾ ರೀತಿಯ ಸಹಕಾರ ನೀಡಲಾಗುವುದು ಎಂದು ಉದ್ಯಮಿಗಳಿಗೆ ಭರವಸೆ ನೀಡಿದ್ದಾರೆ.

***************

ಯುವಪೀಳಿಗೆ ಮಾದಕ ದ್ರವ್ಯಗಳಿಗೆ ಬಲಿಯಾಗದೇ ಸಾಮಾಜಿಕ ಜಾಲತಾಣದ ದುಷ್ಪರಿಣಾಮಗಳ ವಿರುದ್ಧ ಮನಸ್ಸನ್ನು ಸಾಕರಾತ್ಮಕವಾಗಿ ಸಕ್ರಿಯಗೊಳಿಸುವ ಅಗತ್ಯವಿದೆ ಎಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಕರೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಸಿಎಂಆರ್ ತಂತ್ರಜ್ಞಾನ ಶಿಕ್ಷಣ ಸಂಸ್ಥೆ ಬೆಳ್ಳಿ ಹಬ್ಬ ಉದ್ಘಾಟಿಸಿ ಮಾತನಾಡಿದ ಅವರು, ವೈಫಲ್ಯಗಳಿಂದ ಮನ ನೊಂದರೆ ಪ್ರಾಮಾಣಿಕತೆ, ಏಕಾಗ್ರತೆ ಮತ್ತು ಕಠಿಣ ಪರಿಶ್ರಮದಿಂದ ಯಶಸ್ಸು ಗಳಿಸಲು ಸಾಧ್ಯ ಎಂದು ತಿಳಿಸಿದ್ದಾರೆ.

ಡಿಜಿಟಲ್ ಇಂಡಿಯಾ, ನವೋದ್ಯಮ ಇಂಡಿಯಾ ಹಾಗೂ ಮೇಕ್ ಇನ್ ಇಂಡಿಯಾ ಕಾರ್ಯಕ್ರಮಗಳು ದೇಶದಲ್ಲಿ ಉದ್ಯಮಗಳ ಸೃಷ್ಟಿಗೆ ಪೂರಕ ವಾತಾವರಣ ಕಲ್ಪಿಸುತ್ತಿವೆ. ಭಾರತ ೨೦೪೭ರ ವೇಳೆಗೆ

ವಿಕಸಿತ ರಾಷ್ಟ್ರವಾಗಿ ರೂಪುಗೊಳ್ಳಲು ಯುವಪೀಳಿಗೆ ಶ್ರಮಿಸಬೇಕು ಎಂದು ಉಪರಾಷ್ಟ್ರಪತಿ ಕರೆ ನೀಡಿದ್ದಾರೆ.

***************

ಪ್ರಸಾದ್ ಯೋಜನೆಯಡಿ ಮೈಸೂರಿನ ಚಾಮುಂಡಿ ಬೆಟ್ಟದ ಪಾರಂಪರಿಕತೆಗೆ ಯಾವುದೇ ದಕ್ಕೆ ಆಗದಂತೆ ಅಭಿವೃದ್ಧಿ ಮಾಡಲಾಗುವುದು ಎಂದು ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ ತಿಳಿಸಿದ್ದಾರೆ.

ಪ್ರಸಾದ್ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಚಾಮುಂಡಿ ಬೆಟ್ಟದಲ್ಲಿ ಪರಿಸರಕ್ಕೆ ಧಕ್ಕೆ ಆಗದಂತೆ ಅಭಿವೃದ್ಧಿ ಮಾಡಲಾಗುತ್ತಿದೆ. ಚಾಮುಂಡಿ ಬೆಟ್ಟಕ್ಕೆ ಭೇಟಿ ನೀಡುವ ಭಕ್ತರಿಗೆ ಯಾವುದೇ ತೊಂದರೆ ಆಗದಂತೆ ದರ್ಶನಕ್ಕೆ ಸೂಕ್ತ ವ್ಯವಸ್ಥೆ ಮಾಡಲು ಅಭಿವೃದ್ಧಿ ಮಾಡಲಾಗುತ್ತಿದೆ ಎಂದು ಹೇಳಿದ್ದಾರೆ.

ಬೆಟ್ಟದ ನಿವಾಸಿಗಳ ಸಲಹೆಗಳನ್ನು ಪಡೆದು ಅದರಂತೆ ಯೋಜನೆ ರೂಪಿಸಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

***************

ಜೆಡಿಎಸ್, ಬಿಜೆಪಿ ಮೈತ್ರಿ ಮೂಲಕ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಸಬೇಕೆಂಬುದು ತಮ್ಮ ಪಕ್ಷದ ಉದ್ದೇಶವಾಗಿದ್ದು, ಬಿಜೆಪಿ ನಾಯಕರೊಂದಿಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಕೇಂದ್ರ ಉಕ್ಕು ಮತ್ತು ಭಾರೀ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆ ದೃಷ್ಟಿಯಿಂದ ಇದೇ ೨೪ ರಂದು ಹಾಸನದಲ್ಲಿ ಜನತಾ ಸಮಾವೇಶ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

ರಾಜ್ಯದಲ್ಲಿರುವ ಕಾಂಗ್ರೆಸ್ ಸರ್ಕಾರವನ್ನು ಕಿತ್ತೊಗೆಯುವುದೇ ತಮ್ಮ ಗುರಿ ಎಂದು ತಿಳಿಸಿದ್ದಾರೆ.

***************

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಐಪಿಎಲ್ ಹಾಗೂ ಅಂತಾರಾಷ್ಟ್ರೀಯ ಪಂದ್ಯಗಳು ನಡೆಸಲು ಸಿದ್ಧ ಎಂದು ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫೆಬ್ರವರಿ ಅಂತ್ಯದೊಳಗೆ ಎಲ್ಲ ಮಾನದಂಡಗಳನ್ನು ಪಾಲನೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಗೃಹಸಚಿವ ಪರಮೇಶ್ವರ್ ಅವರಿಗೆ ಧನ್ಯವಾದ ತಿಳಿಸಿದ್ದಾರೆ.

ಎಲ್ಲಾ ಇಲಾಖೆಗಳ ಷರತ್ತುಗಳನ್ನು ಪಾಲಿಸಲಾಗುವುದು ಎಂದು ಅವರು ಭರವಸೆ ನೀಡಿದ್ದಾರೆ. ಐಪಿಎಲ್ ಪಂದ್ಯಾವಳಿ ಕುರಿತಂತೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಆಡಳಿತ ಮಂಡಳಿ ೧೦ ದಿನಗಳಲ್ಲಿ ತನ್ನ ನಿರ್ಧಾರ ತಿಳಿಸಲಿದೆ. ಆರ್‌ಸಿಬಿ ಆಡಳಿತ ಮಂಡಳಿಯನ್ನು ಈಗಾಗಲೇ ಸಂಪರ್ಕಿಸಲಾಗಿದ್ದು, ಅವರು ಯಾವುದೇ ಸ್ಪಷ್ಟ ಸಂದೇಶ ನೀಡಿಲ್ಲ ಎಂದು ಮಾಹಿತಿ ನೀಡಿದ್ದಾರೆ.

ಅಂತಾರಾಷ್ಟ್ರೀಯ ಪಂದ್ಯಾವಳಿಗಳನ್ನು ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಆಯೋಜಿಸಲು ಭಾರತೀಯ ಕ್ರಿಕೆಟ್ ಮಂಡಳಿ ಈಗಾಗಲೇ ಅನುಮತಿ ನೀಡಿದೆ ಎಂದು ಹೇಳಿದ್ದಾರೆ.

ಮುಂದಿನ ದಿನಗಳಲ್ಲಿ ಡಿಜಿಟಲ್ ಟಿಕೆಟ್ ನೀಡಲು ಕೆಎಸ್‌ಸಿಎ ನಿರ್ಧರಿಸಿದೆ.

***************

ಕರ್ನಾಟಕದಲ್ಲಿ ಜೀವನೋಪಾಯಕ್ಕೆ ಅದರಲ್ಲೂ ಮಹಿಳೆಯರ ಜೀವನೋಪಾಯಕ್ಕೆ ಹೆಚ್ಚು ಆದ್ಯತೆ ನೀಡಲಾಗುತ್ತಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ ಆರ್.ಪಾಟೀಲ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯ ಮತ್ತು ಕರ್ನಾಟಕ ಸರ್ಕಾರದ ಜೀವನೋಪಾಯ ಮತ್ತು ಉದ್ಯಮಶೀಲತೆ ಇಲಾಖೆ ಜಂಟಿಯಾಗಿ ನಡೆಸಿದ "ನೈಸರ್ಗಿಕ ಕೃಷಿ ಕುರಿತ ರಾಷ್ಟ್ರೀಯ ಸಮಾವೇಶ"ದಲ್ಲಿ ಮಾತನಾಡಿದ ಅವರು, ಸಂಜೀವಿನಿ ಒಕ್ಕೂಟದ ಮೂಲಕ, ಮಹಿಳಾ ಸ್ವಸಹಾಯ ಗುಂಪುಗಳು ರಾಸಾಯನಿಕ-ಮುಕ್ತ, ಕಡಿಮೆ-ವೆಚ್ಚದ ನೈಸರ್ಗಿಕ ಕೃಷಿಯನ್ನು ಅಭ್ಯಾಸ ಮಾಡುತ್ತಿವೆ ಎಂದು ಹೇಳಿದ್ದಾರೆ.

ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಮಾತನಾಡಿ, ಕೃಷಿ ಇಲಾಖೆಯಲ್ಲಿ ಈಗಾಗಲೇ ಹಲವಾರು ಯೋಜನೆಗಳನ್ನು ಜಾರಿಗೆ ತರಲಾಗಿದೆ. ನೈಸರ್ಗಿಕ ಕೃಷಿಗೆ ಆದ್ಯತೆ ನೀಡಲು ಹೆಚ್ಚು ಕ್ರಮ ವಹಿಸಲಾಗುತ್ತದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಕೇಂದ್ರ ಸರ್ಕಾರ ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯ ಹೆಸರನ್ನು ವಿಕಸಿತ ಭಾರತ ಜಿ-ರಾಮ್-ಜಿ ಈ ಯೋಜನೆ ಎಂದು ಮರುನಾಮಕರಣ ಮಾಡಿರುವ ನಿರ್ಧಾರದ ವಿರುದ್ಧ ಕಾನೂನು ಹೋರಾಟ ಮಾಡಲು ಈಗಾಗಲೇ ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ಸಚಿವ ಸಂಪುಟದ ತೀರ್ಮಾನವನ್ನು ಪ್ರಧಾನ ಮಂತ್ರಿಯವರಿಗೆ ತಲುಪಿಸಿ, ಯೋಜನೆಯನ್ನು ಮೊದಲಿನ ರೀತಿ ಮುಂದುವರೆಸಲು ಮನವಿ ಮಾಡಲಾಗುವುದು ಎಂದು ಆಹಾರ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

***************

ಮಾದಕ ವ್ಯಸನ ಮುಕ್ತ ಸಮಾಜ ನಿರ್ಮಾಣದ ಜೊತೆಗೆ ಕ್ರೀಡಾ ಪ್ರತಿಭೆಗಳಿಗೆ ವೇದಿಕೆ ಕಲ್ಪಿಸುವ ಉದ್ದೇಶದೊಂದಿಗೆ ಸಂಸದ ಖೇಲ್ ಕ್ರೀಡಾ ಮಹೋತ್ಸವ ಸಂಘಟಿಸಲಾಗಿದೆ ಎಂದು ಉತ್ತರಕನ್ನಡ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ.

*******ಮುಕ್ತಾಯ*******